ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎರಡನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 06ನೇ ಡಿಸೆಂಬರ್, 2013
(ಸಮಯ: ಬೆಳಗ್ಗೆ 10.00 ಗಂಟೆಗೆ)

------

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹತ್ತನೇ ಪಟ್ಟಿ

ಆ) ದಿನಾಂಕ 29.11.2013ರ ಐದನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಕೆ.ಎಸ್.ಪುಟ್ಟಣ್ಣಯ್ಯ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 72(795) : ಕೃಷಿ ರಾಜ್ಯ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹತ್ತನೇ ಪಟ್ಟಿ

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಕೆ.ಜಿ.ಬೋಪಯ್ಯ ಮತ್ತು ಎಂ.ಪಿ ಅಪ್ಪಚ್ಚು(ರಂಜನ್) ಅವರುಗಳು ಪಶ್ಚಿಮಘಟ್ಟ ಅರಣ್ಯ ಪ್ರದೇಶವನ್ನು ಯುನೆಸ್ಕೊ ಪಟ್ಟಿಗೆ ಸೇರ್ಪಡಿಸಿರುವ ಬಗ್ಗೆ ಹಾಗೂ ವಿಜ್ಞಾನಿ ಡಾ॥ ಕಸ್ತೂರಿರಂಗನ್ ಅವರು ನೀಡಿರುವ ವರದಿಯ ಸಾಧಕ-ಬಾಧಕಗಳ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಡಾ॥ ಕೆ. ಸುಧಾಕರ, ಬಿ.ಎಂ.ನಾಗರಾಜ್, ಎಸ್.ಎನ್. ಸುಬ್ಬಾರೆಡ್ಡಿ, ಎಸ್.ಎನ್. ನಾರಾಯಣಸ್ವಾಮಿ ಹಾಗೂ ಇತರರು ಚಿಕ್ಕಬಳ್ಳಾಪುರ ಜಿಲ್ಲೆ ನಂದಿ ಹೋಬಳಿಯ ನೆಲಮಾಕಲಹಳ್ಳಿ ಗ್ರಾಮಗಳಲ್ಲಿ ಜವಳಿ ಪಾರ್ಕ್ ನಿರ್ಮಿಸಲು ಮಂಜೂರು ಮಾಡಲಾದ 84 ಎಕರೆ ಭೂಮಿಯನ್ನು ಕೃಷಿ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸಲು ಸರ್ಕಾರವು ತೀರ್ಮಾನ ತೆಗೆದುಕೊಂಡಿರುವುದರ ಬಗ್ಗೆ ಚರ್ಚೆ.

3. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹೆಚ್.ಡಿ.ರೇವಣ್ಣ, ಕೆ.ಗೋಪಾಲಯ್ಯ ಹಾಗೂ ಇತರರು ಬೆಂಗಳೂರು ಉತ್ತರ ತಾಲ್ಲೂಕು ಕಸಬಾ ಹೋಬಳಿ ನಾಗಶೆಟ್ಟಿಹಳ್ಳಿ ಹಾಗೂ ಭೂಪಸಂದ್ರ ಗ್ರಾಮದ ಕರ್ನಾಟಕ ಹಾಲು ಮಹಾಮಂಡಳಿಗೆ ಸೇರಿದ ಆಸ್ತಿಯನ್ನು ಭೂ ಮಾಫಿಯಾದೊಂದಿಗೆ ಶಾಮೀಲಾಗಿ ಸುಳ್ಳು ದಾಖಲೆಯನ್ನು ಸೃಷ್ಟಿಸಿ ಸರ್ಕಾರವನ್ನು ವಂಚಿಸುತ್ತಿರುವ ಬಗ್ಗೆ ಚರ್ಚೆ.

ಮು.ತಿ.ನೋ.,

4. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹೆಚ್.ಡಿ.ರೇವಣ್ಣ, ಕೆ.ಗೋಪಾಲಯ್ಯ ಹಾಗೂ ಇತರರು ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಹುಹಳ್ಳಿಗಳ ಕುಡಿಯುವ ನೀರು ಯೋಜನೆಗೆ ಹಣ ಬಿಡುಗಡೆಯಾಗಿದ್ದರೂ ಆ ಹಣ ಬಳಸಿಕೊಳ್ಳದೇ ಇರುವುದರಿಂದ ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಿರುವ ಬಗ್ಗೆ ಚರ್ಚೆ.

5. ಶ್ರೀಯುತರುಗಳಾದ ಜಗದೀಶ ಶೆಟ್ಟರ, ಗೋವಿಂದ ಎಂ.ಕಾರಜೋಳ, ಎಸ್. ಸುರೇಶ್ ಕುಮಾರ್, ವಿಶ್ವೇಶ್ವರ ಹೆಗಡೆ ಕಾಗೇರಿ, ಮತ್ತು ಲಕ್ಷ್ಮಣ ಸವದಿ ಹಾಗೂ ಇತರರು ರಾಜ್ಯದಲ್ಲಿ ಇತ್ತೀಚೆಗೆ ಜಾನುವಾರುಗಳು ಕಾಲುಬಾಯಿ ರೋಗಕ್ಕೆ ತುತ್ತಾಗಿ ಸಾವನ್ನಪ್ಪುತ್ತಿರುವುದರಿಂದ, ಕಾಲುಬಾಯಿ ರೋಗ ತಡೆಗೆ ಸರ್ಕಾರವು ಅಗತ್ಯ ಕ್ರಮಕೈಗೊಳ್ಳುವ ಮತ್ತು ಸೂಕ್ತ ಪರಿಹಾರ ನೀಡುವ ಬಗ್ಗೆ ಚರ್ಚೆ.

6. ಶ್ರೀ ಜೆ.ಆರ್.ಲೋಬೊ, ಶ್ರೀಮತಿ ಶಕುಂತಲಾ ಟಿ. ಶೆಟ್ಟಿ ಮತ್ತು ಬಿ.ಎ. ಮೊಹಿದ್ದೀನ್ ಬಾವಾ ಅವರುಗಳು, ಮಂಗಳೂರು ವಿಶ್ವವಿದ್ಯಾನಿಲಯದ ಪ್ರೊಫೆಸರ್, ಸಹ ಪ್ರೊಫೆಸರ್ ಮತ್ತು ಸಹಾಯಕ ಪ್ರೊಫೆಸರುಗಳ ನೇಮಕಾತಿಯಲ್ಲಿ ನಡೆದ ಅವ್ಯಹಾರದ ಬಗ್ಗೆ ಚರ್ಚೆ.

7. ಶ್ರೀಯುತರುಗಳಾದ ಆರ್.ಅಶೋಕ, ವಿ.ಸುನೀಲಕುಮಾರ್, ಸಿ.ಟಿ.ರವಿ ಮತ್ತು ಬಿ.ಎನ್. ವಿಜಯಕುಮಾರ ಅವರುಗಳು ರಾಜ್ಯದಲ್ಲಿ ಬ್ಯಾಂಕ್-ಎ.ಟಿ.ಎಂ ಗಳಲ್ಲಿ ಹಾಗೂ ವಿವಿಧೆಡೆ ನಡೆಯುತ್ತಿರುವ ಹಲ್ಲೆ, ದರೋಡೆ ಮತ್ತು ಕೋಮು ಹಿಂಸಾಚಾರ ಘಟನೆಗಳು ಸೇರಿದಂತೆ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟಿರುವ ಬಗ್ಗೆ ಚರ್ಚೆ.

8. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಜಿ.ಟಿ. ದೇವೇಗೌಡ, ಎನ್. ಚಲುವರಾಯ ಸ್ವಾಮಿ ಮತ್ತು ಮಧು ಬಂಗಾರಪ್ಪ ಹಾಗೂ ಇತರರು ರಾಜ್ಯದ ಸರ್ಕಾರಿ ಆಸ್ಪತ್ರೆಗಳಿಗೆ ಕಳಪೆ ಗುಣಮಟ್ಟದ ಔಷಧಿಗಳ ಸರಬರಾಜಿನಿಂದಾಗಿ ರೋಗಿಗಳಿಗೆ ತೊಂದರೆಯಾಗಿರುವ ಬಗ್ಗೆ ಚರ್ಚೆ.

9. ಶ್ರೀಯುತರುಗಳಾದ ಬಸವರಾಜ ಬೊಮ್ಮಾಯಿ, ಲಕ್ಷ್ಮಣ ಸಂಗಪ್ಪ ಸವದಿ, ಭರಮಗೌಡ ಆಲಗೌಡ ಕಾಗೆ ಅವರುಗಳು ಕೇಂದ್ರ ಸರ್ಕಾರದ ನೀರಾವರಿ ಇಲಾಖೆಯು ಎಐಬಿಪಿ ಹೊಸ ನಿಯಮಗಳನ್ನು ಜಾರಿಗೆ ತಂದಿದ್ದು ನಮ್ಮ ರಾಜ್ಯದಲ್ಲಿ ಈಗಾಗಲೇ ಎಐಬಿಪಿ ಅಡಿಯಲ್ಲಿರುವ ಯೋಜನೆಗಳು ಹಾಗೂ ಹೊಸದಾಗಿ ಸೇರ್ಪಡೆಯಾಗಿರುವ ಯೋಜನೆಗಳನ್ನು ಇ.ಆರ್.ಎಂ. ಮತ್ತು ಕಾಡಾ ಸ್ಕೀಂಗಳಡಿಯಲ್ಲಿ ಬಳಸಬಹುದಾದ ಪರಿಣಾಮಗಳ ಬಗ್ಗೆ ಚರ್ಚೆ.

10. ಶ್ರೀಯುತರುಗಳಾದ ಎಸ್.ಮಧುಬಂಗಾರಪ್ಪ, ಕೆ.ಎಂ.ಶಿವಲಿಂಗೇಗೌಡ, ಸಿ.ಎನ್.ಬಾಲಕೃಷ್ಣ, ಬಿ.ಬಿ. ನಿಂಗಯ್ಯ ಹಾಗೂ ಇತರರು ರಾಜ್ಯದ ಅರಣ್ಯ ಜಮೀನುಗಳಲ್ಲಿ ಬಗರ್‌ಹುಕುಂ ಸಾಗುವಳಿ ಮಾಡುತ್ತಿರುವ ರೈತರಿಗೆ ಹಾಗೂ ಅರಣ್ಯವಾಸಿಗಳಿಗೆ ಹಕ್ಕುಗಳನ್ನು ಮಾನ್ಯ ಮಾಡುವ ಸಲುವಾಗಿ ಅಧಿನಿಯಮ 2006, 2008 ಹಾಗೂ 2012ರ ಕಾಯ್ದೆ ಅನ್ವಯ ಗ್ರಾಮ ಸಮಿತಿಗಳನ್ನು ರಚಿಸಲು ಹಾಗೂ ಬಗರ್‌ಹುಕುಂ ಸಾಗುವಳಿದಾರರಿಗೆ ಹಕ್ಕುಪತ್ರಗಳನ್ನು ವಿಸ್ತರಿಸುವ ಬಗ್ಗೆ ಚರ್ಚೆ.

11. ಶ್ರೀಯುತರುಗಳಾದ ಬಸವರಾಜ ಬೊಮ್ಮಾಯಿ, ಲಕ್ಷ್ಮಣ ಸವದಿ, ಭರಮಗೌಡ ಕಾಗೆ, ಸಿ.ಟಿ.ರವಿ, ಹಾಗೂ ಡಿ.ಎನ್. ಜೀವರಾಜ್ ಅವರುಗಳು ಕೇಂದ್ರ ಸರ್ಕಾರವು ಪಶ್ಚಿಮಘಟ್ಟ ಪರಿಸರ ಹಾಗೂ ಅರಣ್ಯ ರಕ್ಷಣೆಗಾಗಿ ಹೊರಡಿಸಿದ ಆದೇಶದಿಂದ ರಾಜ್ಯದ ಪಶ್ಚಿಮಘಟ್ಟ ಪ್ರದೇಶಗಳಲ್ಲಿ ವಾಸಿಸುತ್ತಿರುವ ಜನರ ಮೇಲೆ ಆಗುತ್ತಿರುವ ಪರಿಣಾಮಗಳ ಬಗ್ಗೆ ಚರ್ಚೆ.

12. ಶ್ರೀಯುತರುಗಳಾದ ಕೆ.ಬಿ. ಪ್ರಸನ್ನ ಕುಮಾರ್, ಪ್ರಿಯಾಂಕ್ ಖರ್ಗೆ, ಶಾರದಾ ಪೂರ್ಯ ನಾಯಕ ಅವರುಗಳು ಶಿವಮೊಗ್ಗ ಮತ್ತು ಗುಲಬರ್ಗಾ ನಗರಗಳಲ್ಲಿ ನಡೆಯುತ್ತಿದ್ದ ವಿಮಾನ ನಿಲ್ದಾಣ ಕಾಮಗಾರಿಯನ್ನು ಸ್ಥಗಿತಗೊಳಿಸಿರುವ ಬಗ್ಗೆ ಚರ್ಚೆ.

13. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಕೆ. ಕುಮಾರಸ್ವಾಮಿ, ಬಿ.ಬಿ.ನಿಂಗಯ್ಯ, ವೈ.ಎಸ್.ವಿ.ದತ್ತಾ ಮತ್ತು ಎಸ್. ಮಧು ಬಂಗಾರಪ್ಪ ಅವರುಗಳು ಚಿಕ್ಕಮಗಳೂರು ಶಿವಮೊಗ್ಗ ಮತ್ತು ಕೊಡಗು ಜಿಲ್ಲೆಗಳಲ್ಲಿ ಅಕಾಲಿಕ ಭಾರೀ ಮಳೆಯುಂಟಾದ ಹಿನ್ನೆಲೆಯಲ್ಲಿ ಕಾಫೀ ಏಲಕ್ಕಿ ಮತ್ತು ಮೆಣಸಿನ ಬೆಳೆಗಳು ನಾಶವಾಗಿರುವುದರಿಂದ ರೈತರಿಗೆ ನಷ್ಟವುಂಟಾಗಿದ್ದು ಅಂತಹ ರೈತರಿಗೆ ಸೂಕ್ತ ಪರಿಹಾರ ನೀಡುವ ಬಗ್ಗೆ ಚರ್ಚೆ.

14. ಶ್ರೀಯುತರುಗಳಾದ ಬಿ.ಸುರೇಶ್‌ಗೌಡ ಮತ್ತು ಡಾ|| ರಫೀಕ್ ಅಹ್ಮದ್ ಎಸ್ ಅವರುಗಳು ಹೇಮಾವತಿ ಜಲಾಶಯದಿಂದ ತುಮಕೂರು ಬ್ರಾಂಚ್ ಕೆನಾಲ್‌ಗೆ ಹಂಚಿಕೆಯಾಗಿರುವ ಬಾಕಿ ನೀರನ್ನು ವರ್ಷದಲ್ಲಿ 8 ತಿಂಗಳು ಹರಿಸಲು ಕ್ರಮ ಕೈಗೊಳ್ಳುವ ಬಗ್ಗೆ ಚರ್ಚೆ.

15. ಶ್ರೀ ಎನ್. ಚಲುವರಾಯಸ್ವಾಮಿ, ಅವರು ರಾಜ್ಯದಲ್ಲಿ ಇತ್ತೀಚೆಗೆ ಹಲವಾರು ಜಾನುವಾರುಗಳು ಕಾಲುಬಾಯಿ ಜ್ವರದಿಂದ ಬಳಲಿ ಮೃತಪಟ್ಟಿದ್ದರಿಂದ ಸಂಕಷ್ಟಕ್ಕೀಡಾದ ರೈತರಗಳಿಗೆ ಪರಿಹಾರ ನೀಡುವ ಬಗ್ಗೆ ಚರ್ಚೆ.

16. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಡಿ.ನಾಗರಾಜಯ್ಯ, ಹೆಚ್.ಡಿ.ರೇವಣ್ಣ, ಕೆ.ಎಂ. ಶಿವಲಿಂಗೇಗೌಡ ಮತ್ತು ಎಸ್. ಮಧು ಬಂಗಾರಪ್ಪ ಅವರುಗಳು ರಾಜ್ಯದಲ್ಲಿ ಕೆಲವು ಜಿಲ್ಲೆಗಳಲ್ಲಿ ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಿರುವಂತೆ ಜಿಲ್ಲಾಧಿಕಾರಿಯಿಂದ ವರದಿ ಬಂದಿದ್ದರೂ ಸಹ ಸರ್ಕಾರವು ಆ ಬಗ್ಗೆ ಘೋಷಣೆ ಮಾಡದಿರುವ ಬಗ್ಗೆ ಚರ್ಚೆ.

17. ಶ್ರೀಯುತರುಗಳಾದ ಬಿ.ಎಸ್.ಯಡಿಯೂರಪ್ಪ, ಯು.ಬಿ.ಬಣಕಾರ ಮತ್ತು ಡಾ|| ವಿ.ಐ. ಪಾಟೀಲ್ ಅವರುಗಳು ಅನ್ನಭಾಗ್ಯ ಯೋಜನೆಯಡಿ ಬಿಪಿಎಲ್ ಕಾರ್ಡುದಾರರಿಗೆ ಪ್ರತಿ ತಿಂಗಳು ನೀಡುತ್ತಿರುವ 30 ಕೆ.ಜಿ. ಅಕ್ಕಿಯು ಕಾಳ ಸಂತೆಯಲ್ಲಿ ಮಾರಾಟವಾಗುತ್ತಿರುವ ಬಗ್ಗೆ

ಮತ್ತು

ಶ್ರೀಯುತರುಗಳಾದ ಜಗದೀಶ ಶೆಟ್ಟರ, ಬಸವರಾಜ್ ಬೊಮ್ಮಾಯಿ, ಎಸ್ ಸುರೇಶ್ ಕುಮಾರ್, ವಿಶ್ವೇಶ್ವರ ಹೆಗಡೆ ಕಾಗೇರಿ, ಮತ್ತು ಲಕ್ಷ್ಮಣ ಸವದಿ ಹಾಗೂ ಇತರರು ರಾಜ್ಯದಲ್ಲಿ ಜಾರಿಗೆ ತರಲಾದ ಅನ್ನಭಾಗ್ಯ ಯೋಜನೆಯ ನ್ಯೂನತೆಯ ಬಗ್ಗೆ ಹಾಗೂ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರವು ವಿಫಲವಾಗಿರುವ ಬಗ್ಗೆ ಚರ್ಚೆ.

18. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಕೆ.ಎಂ.ಶಿವಲಿಂಗೇಗೌಡ, ಹೆಚ್.ಡಿ.ರೇವಣ್ಣ, ಕೆ.ಎಸ್. ಮಂಜುನಾಥಗೌಡ ಹಾಗೂ ಇತರರು ಕಂದಾಯ ಇಲಾಖೆಯಲ್ಲಿ ರೈತರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಚರ್ಚೆ.

19. ಶ್ರೀಯುತರುಗಳಾದ ಕೆ.ಎಸ್. ಪುಟ್ಟಣ್ಣಯ್ಯ ,ಅಶೋಕ ಖೇಣಿ ಮತ್ತು ಯು.ಬಿ. ಬಣಕಾರ ಅವರುಗಳು ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿ ಬಗ್ಗೆ ಚರ್ಚೆ.

3. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಡಿ. ರೇವಣ್ಣ ಅವರು ಹೊಳೇನರಸಿಪುರ ತಾಲ್ಲೂಕು ಕಸಬಾ ಹೋಬಳಿಯ ಸರ್ವೇ ನಂಬರ್ 8- ಪಿ 1, ರಿಂದ ಪಿ 4ರ ವರೆಗಿನ ಜಮೀನುಗಳನ್ನು ಕಾನೂನು ಬಾಹಿರವಾಗಿ ನೋಂದಣಿ ಮಾಡಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2. ಶ್ರೀಮತಿ ಶಶಿಕಲಾ ಅಣ್ಣಾಸಾಹೇಬ ಜೊಲ್ಲೆ ಅವರು ನಗರಸಭೆ, ಪುರಸಭೆ, ಮತ್ತು ಪಟ್ಟಣ ಪಂಚಾಯತ್‌ಗಳು ತೆರಿಗೆ ಸಂಗ್ರಹ ಮಾಡುವಲ್ಲಿ ವಿಫಲವಾಗಿರುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

3. ಶ್ರೀ ತನ್ವೀರ್ ಸೇಠ್ ಅವರು ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿ ಇತ್ತೀಚೆಗೆ ನಡೆದ ಎಸ್.ಸಿ.ವಿ.ಟಿ ಪರೀಕ್ಷೆಯಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.

4. ಡಾ॥ ಸಿ.ಎನ್.ಅಶ್ವತ್ಥ್ ನಾರಾಯಣ ಅವರು ರಾಜ್ಯದಲ್ಲಿ ನಕಲಿ ವೈದ್ಯರುಗಳ ಹಾವಳಿ ಹೆಚ್ಚಾಗಿ ರೋಗಿಗಳಿಗೆ ಅತೀವ ತೊಂದರೆಯುಂಟಾಗುತ್ತಿರುವುದರಿಂದ ನಕಲಿ ವೈದ್ಯರ ಹಾವಳಿ ತಡೆಗಟ್ಟಲು ಸೂಕ್ತ ಕಾನೂನು ರೂಪಿಸುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

5. ಶ್ರೀ ಕೆ.ಎಸ್. ಮಂಜುನಾಥ್‌ಗೌಡ ಅವರು ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕನ್ನು ಬರಪೀಡಿತ ತಾಲ್ಲೂಕೆಂದು ಘೋಷಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

6. ಶ್ರೀ ಎಸ್.ಆರ್. ವಿಶ್ವನಾಥ ಅವರು ನಿವೇಶನಗಳ ನೋಂದಣಿ ಮಾಡುವ ಬಗೆಗೆ ಇರುವ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7. ಶ್ರೀಯುತರುಗಳಾದ ಡಾ॥ ಸುಧಾಕರ್, ಕೆ.ಎಸ್. ಮಂಜುನಾಥ್‌ಗೌಡ, ಎಂ.ಕೃಷ್ಣಪ್ಪ ಮತ್ತು ಪಿಳ್ಳಮುನಿಶಾಮಪ್ಪ ಅವರುಗಳು ಡಾ॥ ಡಿ.ವಿ. ಗುಂಡಪ್ಪ ಜ್ಞಾನವಾಹಿನಿ ವಿಶ್ವವಿದ್ಯಾಲಯದ ಸ್ಥಾಪನೆ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

8. ಶ್ರೀಮತಿ ಶಶಿಕಲಾ ಅಣ್ಣಾಸಾಹೇಬ ಜೊಲ್ಲೆ ಅವರು ರಾಜ್ಯದ ಗ್ರಾಹಕರ ವೇದಿಕೆಯ ಅಧ್ಯಕ್ಷರುಗಳ ನೇಮಕಾತಿ ಮಾಡದೇ ವಿಳಂಬನೀತಿಯನ್ನು ಅನುಸರಿಸುತ್ತಿರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರ ಗಮನ ಸೆಳೆಯುವುದು.

9. ಶ್ರೀಯುತರುಗಳಾದ ಬಿ.ಆರ್. ಪಾಟೀಲ್, ಗುರು ಪಾಟೀಲ್ ಶಿರವಾಳ ಅವರುಗಳು ಹೈದ್ರಾಬಾದ್ ಮತ್ತು ಮುಂಬಯಿ ಕರ್ನಾಟಕದಲ್ಲಿ ತೊಗರಿ ಬೆಳೆಯುವ ರೈತರಿಗೆ ಸೂಕ್ತ ಬೆಲೆ ಸಿಗದೆ ತೊಂದರೆಯುಂಟಾಗುತ್ತಿರುವುದರಿಂದ ತೊಗರಿ ಬೆಳೆಗೆ ಬೆಂಬಲ ನೀಡುವ ಬಗ್ಗೆ ಮಾನ್ಯ ಕೃಷಿ ರಾಜ್ಯ ಸಚಿವರ ಗಮನ ಸೆಳೆಯುವುದು.

10. ಶ್ರೀ ವಿಜಯಾನಂದ್ ಎಸ್ ಕಾಶಪ್ಪನವರ್ ಅವರು ಡಾ|| ನಂಜುಂಡಪ್ಪ ವರದಿಯನ್ವಯ ಬಾಗಲಕೋಟೆ ಜಿಲ್ಲೆಯ ಹುನಗುಂದ ತಾಲ್ಲೂಕನ್ನು ಬರಪೀಡಿತ ತಾಲ್ಲೂಕುಗಳ ಪಟ್ಟಿಯಲ್ಲಿ ಸೇರಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

11. ಶ್ರೀ ರಾಜು ಅಲಗೂರು ಅವರು ಟಿಪ್ಪು ಸುಲ್ತಾನರವರ ಜಯಂತ್ಯೋತ್ಸವದ ದಿನದಂದು ಸರ್ಕಾರಿ ರಜೆಯನ್ನಾಗಿ ಘೋಷಿಸಿ ಜಯಂತ್ಯೋತ್ಸವ ಆಚರಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

12. ಶ್ರೀ ಡಿ. ನಾಗರಾಜಯ್ಯ ಅವರು ತುಮಕೂರು ಜಿಲ್ಲೆ ಕುಣಿಗಲ್ ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ಕಟ್ಟಡ ನಿರ್ಮಾಣಕ್ಕಾಗಿ ಹಣ ಮಂಜೂರಾಗಿದ್ದರೂ ಸಹ ಕಾಮಗಾರಿಗಳು ಸ್ಥಗಿತಗೊಂಡಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

13. ಶ್ರೀ ತನ್ವೀರ್ ಸೇಠ್ ಅವರು ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿ ಇತ್ತೀಚಿಗೆ ಪದವಿ ಪೂರ್ವ ಶಿಕ್ಷಣದಲ್ಲಿನ ವೃತ್ತಿ ಆಧಾರಿತ ಕೋರ್ಸುಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಅರೆ ಕಾಲಿಕ ಬೋಧಕರನ್ನು ಕಿರಿಯ ತರಬೇತಿ ಅಧಿಕಾರಿ ಹುದ್ದೆಗೆ ವಿಲೀನಗೊಳಿಸಿರುವ ಮಾದರಿಯಲ್ಲಿಯೇ ಆ ಇಲಾಖೆಯ ಅತಿಥಿ ಬೋಧಕರುಗಳನ್ನು ಕಿರಿಯ ತರಬೇತಿ ಅಧಿಕಾರಿ ಹುದ್ದೆಗೆ ವಿಲೀನಗೊಳಿಸುವ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.

14. ಶ್ರೀ ಸಂಜಯ ಬಿ. ಪಾಟೀಲ್ ಅವರು ಬೆಳಗಾವಿ ಜಿಲ್ಲೆಯಲ್ಲಿ ನ್ಯಾಯ ಬೆಲೆ ಅಂಗಡಿಗಳಲ್ಲಿ ದರಪಟ್ಟಿಯ ಫಲಕಗಳನ್ನು ಪ್ರದರ್ಶಿಸದೆ ಹೆಚ್ಚಿನ ದರವನ್ನು ವಸೂಲಿ ಮಾಡುತ್ತಿರುವುದರಿಂದ ಬಡವರ್ಗದ ಜನರಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರ ಗಮನ ಸೆಳೆಯುವುದು.

15. ಶ್ರೀ ಶಿವಾನಂದ ಎಸ್. ಪಾಟೀಲ್ ಅವರು ಬಿಜಾಪುರ ಜಿಲ್ಲೆಯ ಬಸವನ ಬಾಗೇವಾಡಿ ವ್ಯಾಪ್ತಿಯಲ್ಲಿ ಬರುವ ರಾಷ್ಟ್ರೀಯ ಹೆದ್ದಾರಿ 13ರ ಅಕ್ಕ-ಪಕ್ಕದ ಗ್ರಾಮಗಳಿಗೆ ಸರ್ವಿಸ್ ರಸ್ತೆಯನ್ನು ನಿರ್ಮಾಣ ಮಾಡದೆ ತೊಂದರೆಯುಂಟಾಗುತ್ತಿರುವುದರಿಂದ ಅಲ್ಲಿನ ಮನಗೂಳಿ ಗ್ರಾಮದ ಕೂಡು ರಸ್ತೆಯ ಮೇಲೆ ಮೇಲುಸೇತುವೆ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

16. ಶ್ರೀ ಯಶವಂತರಾಯಗೌಡ ವಿ. ಪಾಟೀಲ್ ಅವರು ಬಿಜಾಪುರ ಜಿಲ್ಲೆ ಇಂಡಿ ತಾಲ್ಲೂಕಿನ ತೆಗ್ಗಿಹಳ್ಳಿ ಗ್ರಾಮದ ಆಸರೆ ಯೋಜನೆಯ ಕಾಮಗಾರಿಗಳು ಪೂರ್ಣಗೊಳ್ಳದಿರುವುದರಿಂದ ಅಲ್ಲಿನ ಸಂತ್ರಸ್ತರಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

17. ಶ್ರೀ ಹೆಚ್. ಎಸ್. ಶಿವಶಂಕರ ಅವರು ರಾಜ್ಯದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಹಾಗೂ ವೇತನ/ಗೌರವ ಧನ ವಿತರಣೆಯಲ್ಲಿ ಉಂಟಾಗಿರುವ ಅನ್ಯಾಯದ ಬಗ್ಗೆ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

18. ಶ್ರೀ ಆರ್. ಅಶೋಕ್ ಮತ್ತು ಡಾ॥ ಅಶ್ವತ್ಥನಾರಾಯಣ ಅವರುಗಳು ಬೆಂಗಳೂರಿನಲ್ಲಿ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಇತ್ತೀಚಿಗೆ ಬೆಸ್ಕಾಂಗೆ ಹಣ ಪಾವತಿಸದಿರುವುದರಿಂದ ಬೋರ್‌ವೆಲ್ ಸಂಪರ್ಕವನ್ನು ಕಡಿತಗೊಳಿಸಿರುವ ಹಾಗೂ ಇಂಜಿನಿಯರ್ಸ್ ಮತ್ತು ಸಿಬ್ಬಂದಿ ವರ್ಗದವರ ಮೊಬೈಲ್ ಬಿಲ್ಲುಗಳನ್ನು ಪಾವತಿಸದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

19. ಶ್ರೀ ಡಿ.ಕೆ. ಶಿವಕುಮಾರ್ ಅವರು ಬೆಂಗಳೂರು-ಮೈಸೂರು ನೈಸ್ ರಸ್ತೆ ಸ್ಥಾಪಿಸಲು ಬಿ.ಎಂ.ಐ.ಐ.ಸಿ.ಸಿ.ಎ ಸಂಸ್ಥೆ ಸ್ಥಾಪಿಸಿ ಕೆ.ಐ.ಎ.ಡಿ.ಬಿ ಇಲಾಖೆಯಿಂದ ರಸ್ತೆ ನಿರ್ಮಾಣಕ್ಕೆ ರೈತರಿಂದ ಜಮೀನುಗಳನ್ನು ಸ್ವಾಧೀನಪಡಿಸಿಕೊಳ್ಳುವ ಆದೇಶವಿದ್ದರೂ ಕೆಲವು ಜಮೀನುಗಳನ್ನು ಮಾತ್ರ ಸ್ವಾಧೀನಪಡಿಸಿಕೊಂಡು ಕೆಲವು ಜಮೀನುಗಳನ್ನು ಕೈಬಿಟ್ಟಿರುವ ಬಗ್ಗೆ ಮತ್ತು ರಸ್ತೆಯ ಎರಡೂ ಬದಿ ತಡೆಗೋಡೆ ನಿರ್ಮಿಸಿರುವುದರಿಂದ ರೈತರಿಗೆ ಆಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

20. ಶ್ರೀ ಬಿ. ಶಿವಣ್ಣ ಅವರು ಆನೇಕಲ್ ತಾಲ್ಲೂಕು ಸರ್ಜಾಪುರ ಹೋಬಳಿಯ 16 ಕೆರೆಗಳಿಗೆ ಏತ ನೀರಾವರಿ ಮೂಲಕ ನೀರನ್ನು ಹಾಯಿಸುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

4. ಶಾಸನ ರಚನೆ

ವಿಧೇಯಕಗಳನ್ನು ಹಿಂದಕ್ಕೆ ಪಡೆಯುವುದು.

1. **ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ವಿಧೇಯಕ, 2010.**

   ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು) ಅವರು:-

   2010ನೇ ಸಾಲಿನ ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ವಿಧೇಯಕವನ್ನು ಹಿಂಪಡೆಯಲು ಅನುಮತಿ ಕೋರುವುದು.

2. **ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿಷ್ಕರಣೆ (ತಿದ್ದುಪಡಿ) ವಿಧೇಯಕ, 2012.**

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು) ಅವರು:-

2012ನೇ ಸಾಲಿನ ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿಷ್ಕರಣೆ (ತಿದ್ದುಪಡಿ) ವಿಧೇಯಕವನ್ನು ಹಿಂಪಡೆಯಲು ಅನುಮತಿ ಕೋರುವುದು.

5. ಅರ್ಧ ಗಂಟೆ ಕಾಲಾವಧಿ ಚರ್ಚೆ

1. ಶ್ರೀ ಜಗದೀಶ ಶೆಟ್ಟರ ಅವರು "ಅತಿವೃಷ್ಟಿಯಿಂದಾಗಿರುವ ಹಾನಿ" ಬಗ್ಗೆ ದಿನಾಂಕ: 25.11.2013 ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಮೊದಲನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 07(156)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2. ಡಾ॥ ಎಸ್. ಶಿವರಾಜ್ ಪಾಟೀಲ ಅವರು "ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಗ್ರಾಮೀಣ ರಸ್ತೆಗಳ ದುರಸ್ತಿ" ಬಗ್ಗೆ ದಿನಾಂಕ: 27.11.2013 ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಮೂರನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 31(608)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಮತ್ತು

ಡಾ॥ ಎ.ಬಿ. ಮಾಲಕರೆಡ್ಡಿ ಅವರು "ಗ್ರಾಮೀಣ ಸಂಪರ್ಕ ರಸ್ತೆಗಳ ದುರಸ್ತಿ" ಬಗ್ಗೆ ದಿನಾಂಕ: 27.11.2013 ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಮೂರನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 39(374)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

3. ಶ್ರೀ ನಾರಾಯಣಸ್ವಾಮಿ ಎಸ್. ಎನ್. ಅವರು "ಗ್ರಾಮ ಪಂಚಾಯತಿಗಳಲ್ಲಿ "ಈ" ಸ್ವತ್ತು "ಬಿ" ಖಾತೆ ಯೋಜನೆ ಬಗ್ಗೆ ದಿನಾಂಕ: 27.11.2013 ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಮೂರನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 45(567)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

4. ಶ್ರೀ ಎನ್.ಎ. ಹ್ಯಾರಿಸ್ ಅವರು "ಸಂಚಾರ ದಟ್ಟಣೆ ಕಡಿಮೆಗೊಳಿಸಲು ಕ್ರಮಗಳು" ಬಗ್ಗೆ ದಿನಾಂಕ: 03.12.2013 ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಏಳನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 94(1679)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)